# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **933** |
| ಉತ್ತರಿಸಬೇಕಾದ ದಿನಾಂಕ | : | 13.12.2023 |
| ಉತ್ತರಿಸಬೇಕಾದ ಸಚಿವರು | : | ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಸತಿ ಯೋಜನೆಗಳಲ್ಲಿ ಸರ್ಕಾರವೇ ಸಂಪೂರ್ಣ ಮೊತ್ತ ಪಾವತಿಸಿ ಬಡವರಿಗೆ ಉಚಿತ ಸೂರು ಕಲ್ಪಿಸುವ ಪ್ರಸ್ತಾಪವಿದೆಯೇ; | ಬಿ.ಎಲ್.ಸಿ ಮಾದರಿಯಲ್ಲಿ ಫಲಾನುಭವಿಗಳು ತಮ್ಮದೇ ನಿವೇಶನದಲ್ಲಿ ತಾವೇ ಸ್ವತಃ ಮನೆಗಳನ್ನು ನಿರ್ಮಿಸಿಕೊಳ್ಳುತ್ತಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಾಯಧನವನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಲಾಗುತ್ತಿದೆ. ಫಲಾನುಭವಿಗಳು ನಿರ್ಮಾಣ ವೆಚ್ಚದ ಬಾಕಿ ಮೊತ್ತವನ್ನು ತಾವೇ ಸ್ವತಃ ಭರಿಸುವರು. ಬಿ.ಎಲ್.ಸಿ ಮಾದರಿಯಲ್ಲಿ ಸರ್ಕಾರ ಸಂಪೂರ್ಣ ಮೊತ್ತ ಭರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.<br><br>ಎ.ಎಚ್.ಪಿ ಮಾದರಿಯಲ್ಲಿ ಅನುಷ್ಠಾನ ಸಂಸ್ಥೆಗಳು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಾಯಧನದೊಂದಿಗೆ ಅನುಷ್ಠಾನ ಸಂಸ್ಥೆ ಹಾಗೂ ಫಲಾನುಭವಿಗಳಿಂದ ವಂತಿಕೆ ಮೊತ್ತವನ್ನು ಕ್ರೂಢೀಕರಿಸಿಕೊಂಡು ಮನೆಗಳ ನಿರ್ಮಾಣವನ್ನು ಪೂರ್ಣಗೊಳಿಸಬೇಕಿದೆ.<br><br>ಫಲಾನುಭವಿಗಳು ಆರ್ಥಿಕವಾಗಿ ಸಾಮಾಜಿಕವಾಗಿ ಹಿಂದುಳಿದ ವರ್ಗಕ್ಕೆ ಸೇರಿದವರಾಗಿದ್ದು, ಸಕಾಲದಲ್ಲಿ ವಂತಿಕೆ ಮೊತ್ತವನ್ನು ಪಾವತಿಸುವುದು ಕಷ್ಟಸಾಧ್ಯವಾಗಿದೆ. ನಗರ ಸ್ಥಳೀಯ ಸಂಸ್ಥೆಗಳು ಮೂಲಭೂತ ಸೌಕರ್ಯಗಳನ್ನು ಒದಗಿಸಲು ತಮ್ಮ ಪಾಲಿನ ಮೊತ್ತವನ್ನು ಒದಗಿಸಬೇಕಿದ್ದು, ಆದರೆ ಸಕಾಲದಲ್ಲಿ ಈ ಮೊತ್ತವನ್ನು ಭರಿಸುವುದು ಕಷ್ಟಸಾಧ್ಯವಾಗುತ್ತಿದೆ.<br><br>ಈ ಹಿನ್ನಲೆಯಲ್ಲಿ ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸುವ ಉದ್ದೇಶದಿಂದ ಹಂತ ಹಂತವಾಗಿ ಮನೆಗಳನ್ನು ಪೂರ್ಣಗೊಳಿಸಲು ಯೋಜಿಸಲಾಗಿದ್ದು, ಫಲಾನುಭವಿಗಳ ವಂತಿಕೆಗೆ ಎದುರಾಗಿ ಹಂಚಿಕೆ ಮಾಡಿ ವಂತಿಕೆಯನ್ನು ವಸೂಲಿ ಮಾಡಲು ಕ್ರಮ ವಹಿಸಲಾಗುವುದು. ಫಲಾನುಭವಿಗಳಿಗೆ ಬ್ಯಾಂಕ್ ಸಾಲ ಸೌಲಭ್ಯವನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ.<br><br>ಹೀಗಾಗಿ ಎ.ಎಚ್.ಪಿ ಯೋಜನೆಗಳಲ್ಲಿ ಸರ್ಕಾರವೇ ಸಂಪೂರ್ಣ ಮೊತ್ತ ಪಾವತಿಸಿ ಬಡವರಿಗೆ ಉಚಿತ ಸೂರು ಕಲ್ಪಿಸುವ ಪ್ರಸ್ತಾಪ ಇಲ್ಲ. |
| ಆ) | ಹಾಗಿದ್ದಲ್ಲಿ, ಈ ಯೋಜನೆಯನ್ನು ಎಂದಿನಿಂದ ಕಾರ್ಯಗತಗೊಳಿಸಲಾಗುವುದು; | ಅನ್ವಯಿಸುವುದಿಲ್ಲ. |
| ಇ) | ಹಾಲಿ ಇರುವ ಯೋಜನೆಗಳಲ್ಲಿ ಫಲಾನುಭವಿಗಳಿಗೆ ಸಬ್ಸಿಡಿ | ಹಾಲಿ ಇರುವ ಎ.ಎಚ್.ಪಿ ಯೋಜನೆಗಳಡಿ ಮನೆಗಳ ನಿರ್ಮಾಣಕ್ಕೆ ಅಗತ್ಯವಿರುವ ಮೊತ್ತದ ಪೈಕಿ, ಕೇಂದ್ರ ಮತ್ತು |

| | | |
|---|---|---|
| | ಮೊತ್ತ ಹೊರತುಪಡಿಸಿ, ಉಳಿಕೆ ಮೊತ್ತವನ್ನು ಸರ್ಕಾರ ಪಾವತಿಸುವುದೇ ಅಥವಾ ಹೊಸ ಯೋಜನೆಗಳಿಗೆ ಮಾತ್ರ ಇದು ಸೀಮಿತವೇ ? | ರಾಜ್ಯ ಸರ್ಕಾರದ ಸಹಾಯಧನದ ಮೊತ್ತವನ್ನು ಹೊರತುಪಡಿಸಿ ಉಳಿಕೆ ಮೊತ್ತವನ್ನು ಫಲಾನುಭವಿಗಳಿಂದ ಹಾಗೂ ಬ್ಯಾಂಕ್ ಸಾಲ ಸೌಲಭ್ಯ ಒದಗಿಸುವ ಮೂಲಕ ಸಂಗ್ರಹಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ :ವಇ 362 ಹೆಚ್ಎಂ 2023

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು